**ಕರ್ನಾಟಕ ಸರ್ಕಾರ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ. 2300/2022**

ಪಿ.ಡಬ್ಲ್ಯೂಃ 2

ಸಿ.ಡಬ್ಲ್ಯೂಃ 2

| | | |
|---|---|---|
| ಸಾಕ್ಷಿದಾರರ ಹೆಸರು | ಃ | ಕೆಂಚಪ್ಪ |
| ತಂದೆ ಹೆಸರು | ಃ | ಪುಟ್ಟಸ್ವಾಮಿ |
| ವಯಸ್ಸು | ಃ | **55 ವರ್ಷ** |
| ಉದ್ಯೋಗ | ಃ | ವ್ಯವಸಾಯ |
| ವಾಸಸ್ಥಳ | ಃ | ನಂದಿಬಟ್ಟಲು |

**ದಿನಾಂಕಃ21-04-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ ಃ** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

1 ಮತ್ತು 2 ನೇ ಆರೋಪಿತರು ನನ್ನ ತಂದೆ ತಾಯಿ. ಚಾಸಾ-1 ನನ್ನ ಹೆಂಡತಿ. ದಿನಾಂಕಃ 30-08-2021 ರಂದು ಸಂಜೆ 5-30 ಗಂಟೆ ಸಮಯದಲ್ಲಿ ನಾನು ಹೊರಗೆ ಹೋಗಿದ್ದು, ನಂತರ ಮನೆಗೆ ಬಂದಿರುತ್ತೇನೆ. ಆಗ ನನ್ನ ಹೆಂಡತಿಗೂ ಮತ್ತು ನನ್ನ ತಂದೆ ತಾಯಿಗೂ ಜಗಳವಾದ ವಿಚಾರವನ್ನು ಚಾಸಾ-1 ರವರು ನನಗೆ ತಿಳಿಸಿರುತ್ತಾರೆ. ನಾನು ಕೇಳಲು ಹೋದಾಗ ನನಗೆ ಬೈದು ಕೊಲೆ ಬೆದರಿಕೆ ಹಾಕಿರುತ್ತಾರೆ. 2 ನೇ ಆರೋಪಿ ಚಾಸಾ-1 ರವರ ತಲೆ ಕೂದಲನ್ನು ಹಿಡಿದು ಎಳೆದಾಡಿ, 1 ನೇ ಆರೋಪಿಯು ಕಲ್ಲಿನಿಂದ ಹೊಡೆದು ಚಾಸಾ-1 ರವರ ಬೆನ್ನಿಗೆ ಗಾಯ ಮಾಡಿರುತ್ತಾರೆ. ಅವಾಚ್ಯ ಶಬ್ದಗಳಿಂದ ಬೈದು ಕೊಲೆ ಬೆದರಿಕೆ ಹಾಕಿರುತ್ತಾರೆ. ಕೆಲಸ ಮಾಡುತ್ತಿದ್ದ ಕೆಲಸಗಾರರಿಗೂ ಸಹ ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ. ನಂತರ ನನ್ನ ಹೆಂಡತಿಯನ್ನು ತರೀಕೆರೆಯ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆ ಕೊಡಿಸಿರುತ್ತೇನೆ. ನಂತರ ಲಿಂಗದಹಳ್ಳಿ ಪೊಲೀಸ್ ಠಾಣೆಗೆ ಹೋಗಿ ದೂರನ್ನು ನೀಡಿರುತ್ತೇವೆ. ಚಾಸಾ-1 ರವರಿಗೆ ಹೊಡೆದಿರುವುದನ್ನು ನಾನು ಕಣ್ಣಾರೆ ನೋಡಿರುವುದಿಲ್ಲ.

ನ್ಯಾಯಾಲಯದ ಮುಂದೆ ಇರುವ ಮುದ್ದೆ ಮಾಲನ್ನು ಸಾಕ್ಷಿ ನೋಡಿ ಗುರುತಿಸಿರುವುದಿಲ್ಲ.

**ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ.**

ಪಾಟೀ ಸವಾಲಿಗಾಗಿ ಸಮಯಾವಕಾಶ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

ಸಹಿ/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**